ಚಾಮುಂಡೇಶ್ವರಿ ಸಕ್ಕರೆ ಕಾರ್ಖಾನೆಯಿಂದ ಪರಿಸರ ಮಾಲಿನ್ಯ.

೮೦-ಶ್ರೀ ಕೆ.ಎಸ್. ನಾಗೇಗೌಡ (ಕಿರುಗಾವಲು) ಮಾನ್ಯ ಸಕ್ಕರೆ, ಜವಳಿ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆಯ ರಾಜ್ಯ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಮದ್ದೂರು ತಾಲ್ಲೂಕಿನಲ್ಲಿರುವ ಚಾಮುಂಡೇಶ್ವರಿ ಸಕ್ಕೆರೆ ಕಾರ್ಖಾನೆಯಿಂದ ಬಿಡುವ ರಸಾಯನದಿಂದ ಅನೇಕ ಹಳ್ಳಿಗರ ಪರಿಸರ ಮಾಲಿನ್ಯವಾಗಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದರೆ, ಈ ಬಗ್ಗೆ ಪರಿಸರ ಮಾಲಿನ್ಯ ನಿವಾರಿಸಲು ಸರ್ಕಾರದವರು ಕೈಗೊಳ್ಳಲಿರುವ ಕ್ರಮಗಳೇನು,

ಇ) ರಾಜ್ಯದಲ್ಲಿ ಎಷ್ಟು ಸಕ್ಕರೆ ಕಾರ್ಖಾನೆಗಳಿಂದ ಈ ರೀತಿಯ ಪರಿಸರ ಮಾಲಿನ್ಯವಾಗುತ್ತಿದೆ?

ಶ್ರೀ ಪಿ.ಸಿ. ಸಿದ್ದನಗೌಡರು (ಸಕ್ಕರೆ, ಜವಳಿ, ವಿಜ್ಞಾನ ಮತ್ತು ತಂತ್ರಜ್ಞಾನ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆಯ ರಾಜ್ಯ ಸಚಿವರು).

ಅ) ಮದ್ದೂರು ತಾಲ್ಲೂಕಿನಲ್ಲಿರುವ ಚಾಮುಂಡೇಶ್ವರಿ ಸಕ್ಕರೆ ಕಾರ್ಖಾನೆಯು ಕಲುಷಿತ ನೀರನ್ನು ಶುದ್ದೀಕರಿಸಲು ಸಂಸ್ಕರಣ ಘಟಕಗಳನ್ನು ಅಳವಡಿಸಿದ್ದು, ಶುದ್ಧಿಕರಿಸಲ್ಪಟ್ಟ ನೀರನ್ನು ಉದ್ದಿಮೆಯ ೧೪ ಎಕೆರೆ ಜಮೀನಿನಲ್ಲಿ ಹಾಗೂ ಸುತ್ತಮುತ್ತಲಿನ ರೈತರ ಜಮೀನಿನಲ್ಲಿ ವ್ಯವಸಾಯಕ್ಕೆ ಉಪಯೋಗಿಸಲಾಗುತ್ತಿದೆ. ಪರಿಸರ ಮಾಲಿನ್ಯ ಕಾಯ್ದೆಯಡಿಯಲ್ಲಿ ನಿರ್ಧರಿಸಲಾದ ಮಿತಿಗೆ ಮೀರಿದ್ದಲ್ಲಿ ಸೂಕ್ತ ಕ್ರಮ ತೆಗೆದು ಕೊಳ್ಳಲಾಗುವುದು.

ಆ) ರಾಜ್ಯದಲ್ಲಿ ಒಟ್ಟು ೩೦ ಸಕ್ಕರೆ ಕಾರ್ಖಾನೆಗಳಿದ್ದು, ಬಹುತೇಕ ಕಾರ್ಖಾನೆಗಳು ಮಾಲಿನ್ಯ ನಿಯಂತ್ರಣ ಕ್ರಮಗಳನ್ನು ಕೈಗೊಂಡಿದೆ.

ಇ) ಮಂಡ್ಯದಲ್ಲಿರುವ ಮೈಸೂರು ಸಕ್ಕರೆ ಕಾರ್ಖಾನೆ ಚಿಮಣಿಗಳಿಂದ ಹೊರಬರುತ್ತಿರುವ ಕಪ್ಪು ಬೂದಿಯಿಂದ ನಗರವಾಸಿಗಳಿಗೆ ತೊಂದರೆ ಉಂಟಾಗುತ್ತಿದೆ. ಕಾರ್ಖಾನೆಯು ಅಳವಡಿಸಿರುವ ವಾಯು ಮಾಲಿನ್ಯ ಉಪಕರಣಗಳನ್ನು ಇನ್ನೂ ಉತ್ತಮಗೊಳಿಸಬೇಕಾಗಿದೆ.

ರಾಜ್ಯದಲ್ಲಿರುವ ಅಂಗನವಾಡಿಗಳಲ್ಲಿ ದುರುಪಯೋಗ.

೩೮-ಶ್ರೀ ಕೆ.ಎನ್. ನಾಗೇಗೌಡ (ಕಿರುಗಾವಲು) ಮಾನ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

೧) ರಾಜ್ಯದಲ್ಲಿರುವ ಅಂಗನವಾಡಿಗಳಲ್ಲಿ ಸಾಕಷ್ಟು ದುರುಪಯೋಗವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

೨) ಅಂಗನವಾಡಿಗಳಿಗೆ ಸರಬರಾಜು ಮಾಡುವ ಸಾಮಗ್ರಿಗಳನ್ನು ಖರೀದಿಸುವ ವಿಧಾನವೇನು?